ದಿಃ 22-07-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ:- ವಾದಿ ಪರ ಶ್ರೀ. **PMK** ವಕೀಲರಿಂದಃ

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿದ್ದು , ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯದಿಂದ ಕೂಡಿದ್ದು ಅದನ್ನು ನನ್ನ ಸೂಚನೆಯ ಮೇರೆಗೆ ತಯಾರಿಸಲಾಗಿರುತ್ತದೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ. ನಾನು ನ್ಯಾಯಾಲಯಕ್ಕೆ ನನ್ನ ಪರವಾಗಿ ದಾಖಲಾತಿಗಳನ್ನು ಸಲ್ಲಿಸಿರುತ್ತೇನೆ. ಅವುಗಳನ್ನು ನನ್ನ ಪರವಾಗಿ ಗುರುತಿಸಲು ಪ್ರಾರ್ಥನೆ.

ಸರ್ವೆ ನಂ. 96 ರ ಕ್ಕೆ ಸಂಬಂಧಿಸಿದ 1988-89 ರಿಂದ 1997-98 ರವರೆಗಿನ ಕೈಬರಹದ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-**1** ಮತ್ತು ನಿಪಿ **2** ಎಂದು ಗುರುತಿಸಲಾಯಿತು.

ತಹಶೀಲ್ದಾರ ಅಫಜಲಪುರ ರವರು ನೀಡಿದ ಹಿಂಬರಹ ಪತ್ರವನ್ನು ಹಾಜರುಪಡಿಸಿದು ಅದನ್ನು ನಿಪಿ **3** ಎಂದು ಗುರುತಿಸಲಾಯಿತು.

ಸರ್ವೆ ನಂ. 96 ರ 2012-13 ರಿಂದ 2024-25 ನೇ ಸಾಲಿನ ಒಟ್ಟು 8 ಗಣಕೀಕೃತ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-**4** ರಿಂದ **15** ಎಂದು ಗುರುತಿಸಲಾಯಿತು.

ಒಂದು ಮುಟೇಷನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-**16** ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗಾಗಿ ಮಾಡಲು ಮನವಿಯನ್ನು ಮಾಡಿರುತ್ತಾರೆ. ಸದರಿ ಮನವಿಯನ್ನು ಪುರಸ್ಕರಿಸಿ ಮುಂದುವರೆದ ಮುಖ್ಯ ವಿಚಾರಣೆಯನ್ನು ಮುಂದುಡಲಾಯಿತು.)

**(**ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು**).**

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ ದಂಡಾಧಿಕಾರಿಗಳು
ಅಫಜಲಪೂರ